ರಾಜ್ಯದ ಉನ್ನತ ಶಿಕ್ಷಣ ಕ್ಷೇತ್ರದ ಅಭಿವೃದ್ಧಿ

472 (926) ಶ್ರೀ ಹ್ಯಾರಿಸ್ ಎನ್. ಎ (ಶಾಂತಿನಗರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಉನ್ನತ ಶಿಕ್ಷಣ ಕ್ಷೇತ್ರಕ್ಕೆ ಸರ್ಕಾರದ ಅಭಿವೃದ್ಧಿ ಪರ ಯೋಜನೆಗಳು ಯಾವುವು;

ಆ) ಉನ್ನತ ಶಿಕ್ಷಣ ವಲಯಕ್ಕೆ ರಾಜ್ಯ ಮತ್ತು ಕೇಂದ್ರ ಸರ್ಕಾರದ ಅನುದಾನ ನೀಡಿಕೆಯ ವಿವರಗಳೇನು;

ಇ) ಶಿಕ್ಷಣದ ಗುಣಮಟ್ಟ ಮತ್ತು ಸಮಕಾಲೀನ ಸನ್ನಿವೇಶಕ್ಕೆ ಅನುಗುಣವಾದ ಶಿಕ್ಷಣವನ್ನು ನೀಡುವ ದಿಶೆಯಲ್ಲಿ ಸರ್ಕಾರದ ಚಿಂತನೆಗಳೇನು;

ಈ) ಉನ್ನತ ಶಿಕ್ಷಣಕ್ಕೆ ಸೇರ್ಪಡೆಯಾಗುವ ವಿದ್ಯಾರ್ಥಿಗಳ ಸಂಖ್ಯೆಯಲ್ಲಿ ಹೆಚ್ಚಳದ ಪ್ರಮಾಣದ ವಿವರಗಳೇನು?

ಡಾ. ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ ಸಚಿವರು) :

ಅ) ಅನುಬಂಧದಲ್ಲಿ ಲಗತ್ತಿಸಿದೆ.

ಆ) ಉನ್ನತ ಶಿಕ್ಷಣ ವಲಯಕ್ಕೆ 2010–11ನೇ ಸಾಲಿಗೆ ಯೋಜನೆಯಡಿ ರೂ.665.62 ಕೋಟಿ ಹಾಗೂ ಯೋಜನೇತರ ಅಡಿ ರೂ.1291.21 ಕೋಟಿ ಅಂದರೆ ಒಟ್ಟು;1956.83 ಕೋಟಿ ಮತ್ತು ಕೇಂದ್ರ ಸರ್ಕಾರದಿಂದ ರೂ.2216.25 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ.

ಇ) ಅನುಬಂಧದಲ್ಲಿ ಲಗತ್ತಿಸಿದೆ.

ಈ) ಅನುಬಂಧದಲ್ಲಿ ಲಗತ್ತಿಸಿದೆ.

ಅನುಬಂಧ–1

ಉನ್ನತ ಶಿಕ್ಷಣ ಎಂದಿಗಿಂತಲೂ ಇಂದು ಅತಿ ಹೆಚ್ಚು ವೇಗವಾಗಿ ತನ್ನ ಸಾಧ್ಯತೆಗಳನ್ನು ವಿಸ್ತರಿಸಿಕೊಳ್ಳುತ್ತಾ, ಬದಲಾವಣೆಯ ಹಾದಿಯಲ್ಲಿ ಸಾಗಿದೆ. ಜಾಗತೀಕರಣದ ಹಿನ್ನೆಲೆಯಲ್ಲಿ ಉನ್ನತ ಶಿಕ್ಷಣದಲ್ಲಿ ಆಗಬಹುದಾದ ಬದಲಾವಣೆಗಳು ಸಾಮಾಜಿಕ, ಆರ್ಥಿಕ ಮತ್ತು ಮಾನವಸಂಪನ್ಮೂಲದ ವಿಷಯಗಳಲ್ಲಿ ಅತಿಹೆಚ್ಚು ಪರಿಣಾಮಕಾರಿಯಾಗಲಿವೆ. ಕಾಲೇಜು ಶಿಕ್ಷಣ ಇಲಾಖೆಯು ಉನ್ನತ ಶಿಕ್ಷಣವನ್ನು ಹೆಚ್ಚು ಪ್ರಸ್ತುತ, ಪ್ರಯೋಜನಕಾರಿ ಮತ್ತು

ಉಪಯುಕ್ತವಾಗಿಸಲು ಸಾಮಾಜಿಕ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಸಮಾಜದ ಎಲ್ಲಾ ವರ್ಗದವರಿಗೂ ಉನ್ನತ ಶಿಕ್ಷಣವನ್ನು ಪಡೆಯುವ ಅವಕಾಶಗಳನ್ನು ಕಲ್ಪಿಸುವ ದೃಷ್ಟಿಯಿಂದ ಪದವಿ/ಸ್ನಾತಕೋತ್ತರ ಕೋರ್ಸುಗಳನ್ನು ರಾಜ್ಯದ ಎಲ್ಲಾ ಜಿಲ್ಲಾ, ತಾಲ್ಲೂಕು ಹಾಗೂ ಪ್ರಮುಖ ಹೋಬಳಿ ಕೇಂದ್ರಗಳಲ್ಲಿ 356 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸಿದ್ದು, ಪ್ರಮುಖ ಜಿಲ್ಲಾ ಕೇಂದ್ರಗಳ 40 ಸರ್ಕಾರಿ ಕಾಲೇಜುಗಳಲ್ಲಿ 105 ಸ್ನಾತಕೋತ್ತರ ಕೋರ್ಸು ಗಳನ್ನು ಪ್ರಾರಂಭಿಸಿ, ಗುಣಮಟ್ಟದ ಶಿಕ್ಷಣವನ್ನು ನೀಡುತ್ತಿದೆ.

"ಹೊಸಹೆಜ್ಜೆ" – ಒಂದು ವಿನೂತನ ಶೈಕ್ಷಣಿಕ ಕಾರ್ಯಕ್ರಮ:

ಶಿಕ್ಷಣವನ್ನು ಹೆಚ್ಚು ಸಮಗ್ರವಾಗಿರುವಂತೆಯೂ ಮತ್ತು ಕ್ರಿಯಾತ್ಮಕವಾ ಗಿರುವಂತೆಯೂ ಮಾಡಲು ಕಾಲೇಜು ಶಿಕ್ಷಣ ಇಲಾಖೆಯು ಕೆಲವು ಪ್ರಮುಖ ಚರಿತ್ರಾರ್ಹ ಮತ್ತು ವಿನೂತನ ಯೋಜನೆ "ಹೊಸಹೆಜ್ಜೆ" ಯನ್ನು ಈ ಕೆಳಗಿನ ಕಾರ್ಯಕ್ರಮಗಳ ಮೂಲಕ ಅನುಷ್ಠಾನಗೊಳಿಸುತ್ತಿದೆ.

❖ **ಸಹಯೋಗ**

ತರಬೇತಿ ಕಾರ್ಯಕ್ರಮಗಳ ಮೂಲಕ ಉದ್ಯೋಗ ಮಾರುಕಟ್ಟೆಯಲ್ಲಿ ಅಗತ್ಯವಿರುವ ಕುಶಲತೆಗಳನ್ನು ನಮ್ಮ ಪದವೀಧರರಲ್ಲಿ ಒದಗಿಸಿ ಉದ್ಯೋಗಯೋಗ್ಯ ವ್ಯಕ್ತಿಗಳನ್ನಾಗಿ ರೂಪುಗೊಳಿಸುವುದೇ "ಸಹಯೋಗ" ಕಾರ್ಯಕ್ರಮದ ಉದ್ದೇಶ.

❖ **ಆಂಗ್ಲ**

356 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿ ರುವವರಲ್ಲಿ ಹೆಚ್ಚಿನ ಸಂಖ್ಯೆಯ ಗ್ರಾಮೀಣ ಪ್ರದೇಶದ ಪ್ರಥಮ ತಲೆಮಾರಿನ ವಿದ್ಯಾರ್ಥಿಗಳನ್ನು ಆಂಗ್ಲ ಭಾಷೆಯಲ್ಲಿ ಸಶಕ್ತಗೊಳಿಸಿ ಉದ್ಯೋಗ ಮಾರುಕಟ್ಟೆಯಲ್ಲಿ ಸ್ಪರ್ಧಾಸಾಮರ್ಥ್ಯವನ್ನು ಹೆಚ್ಚಿಸುವ ಉದ್ದೇಶದಿಂದ ರೂಪುಗೊಂಡಿರುವ ಕಾರ್ಯಕ್ರಮ – "ಆಂಗ್ಲ".

❖ **ಮಾನವತೆ**

ಸತ್ಯನಿಷ್ಠೆ, ಅಹಿಂಸೆ, ಸೌಹಾರ್ದತೆ, ಪ್ರಾಮಾಣಿಕತೆಯಂತಹ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸುವುದೇ ಈ ಯೋಜನೆಯ ಮುಖ್ಯ ಉದ್ದೇಶ.

❖ **ಹೊಸ ಕೋರ್ಸು/ಕಾಂಬಿನೇಷನ್:**

- 150 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 166 ಹೊಸ ಕೋರ್ಸು/ಕಾಂಬಿನೇಷನ್‌ಗಳನ್ನು ಪ್ರಾರಂಭಿಸಲಾಗಿದೆ.
- 2010–11ನೇ ಸಾಲಿನಲ್ಲಿ 36 ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಗಳಲ್ಲಿ 106 ಸ್ನಾತಕೋತ್ತರ ಕೋರ್ಸುಗಳನ್ನು ಪ್ರಾರಂಭಿಸಲಾಗಿದ್ದು ಇವುಗಳ ಅಭಿವೃದ್ಧಿಗೆ ರೂ.10.00 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.
- 2010–11ನೇ ಸಾಲಿನಲ್ಲಿ 115 ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಗಳಲ್ಲಿ ಹೊಸದಾಗಿ ವಿಜ್ಞಾನ ವಿಷಯಗಳನ್ನು ಪ್ರಾರಂಭಿಸಲು ಹಾಗೂ ಅಭಿವೃದ್ಧಿ ಪಡಿಸಲು ಪ್ರತಿ ಕಾಲೇಜಿಗೆ ತಲಾ ರೂ.35.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

❖ **ತರಬೇತಿ:**

- ಪದವಿ ಶಿಕ್ಷಣಕ್ಕೆ ಬರುವ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು ಇಲಾಖೆಯ ಆಶಯವಾಗಿದೆ. ಈ ನಿಟ್ಟಿನಲ್ಲಿ ಈ ಇಲಾಖೆಯ ವ್ಯಾಪ್ತಿಗೆ ಬರುವ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಅಧಿಕಾರಿಗಳು/ಪ್ರಾಂಶುಪಾಲರು/ ಉಪನ್ಯಾಸಕರು ಮೈಸೂರಿನ ಆಡಳಿತ ತರಬೇತಿ ಸಂಸ್ಥೆ, ಸಿ.ಎಲ್.ಹೆಚ್.ಆರ್.ಡಿ. ಮಂಗಳೂರು ಹಾಗೂ ಪ್ರಾದೇಶಿಕ ಕಛೇರಿ ವ್ಯಾಪ್ತಿಯಲ್ಲಿ ತರಬೇತಿ ನೀಡಲಾಗುತ್ತಿದೆ. ಹಾಗೂ ಇಲಾಖೆಯ ಆಡಳಿತ ಸಿಬ್ಬಂದಿಗಳಿಗೆ ಆಯಾ ಜಿಲ್ಲೆಯ ಜಿಲ್ಲಾ ತರಬೇತಿ ಸಂಸ್ಥೆಗಳಲ್ಲಿ ತರಬೇತಿಗಳಿಗೆ ನಿಯೋಜಿಸಲಾಗಿದೆ.
- ಪ್ರಸಕ್ತ 2010–11ನೇ ಶೈಕ್ಷಣಿಕ ಸಾಲಿನಲ್ಲಿ ವಿಜ್ಞಾನ ಪದವಿ ಕಾಲೇಜುಗಳ ಬೋಧಕರಿಗೆ ಪ್ರಚಲಿತ 10 ಮೂಲ ವಿಜ್ಞಾನ ವಿಷಯಗಳಲ್ಲಿ ಪುನಶ್ಚೇತನ ತರಬೇತಿ ಕಾರ್ಯಗಾರಗಳನ್ನು ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯ 6 ಪ್ರಾದೇಶಿಕ ಕಛೇರಿ ವ್ಯಾಪ್ತಿಯಲ್ಲಿ ವಿಜ್ಞಾನ ಪದವಿ ಕಾಲೇಜುಗಳ ಬೋಧಕರಿಗೆ ಪ್ರಚಲಿತ ಮೂಲ ವಿಜ್ಞಾನ ವಿಷಯಗಳಲ್ಲಿ ಪುನಶ್ಚೇತನ ತರಬೇತಿ

ಕಾರ್ಯಗಾರಗಳನ್ನು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಹಯೋಗದೊಂದಿಗೆ ಏರ್ಪಡಿಸಲಾಗಿದೆ.

ವಿಧಾನ ಸಭೆ ಸದಸ್ಯರಾದ ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ) ಇವರು ಮಂಡಿಸಿರುವ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 926 ಕ್ಕೆ ಉತ್ತರಗಳು

ಅ) ರಾಜ್ಯದಲ್ಲಿನ ಉನ್ನತ ಶಿಕ್ಷಣ ಕ್ಷೇತ್ರಕ್ಕೆ ಸರ್ಕಾರದ ಅಭಿವೃದ್ಧಿ ಪರ ಯೋಜನೆಗಳು ಯಾವುವು;

ರಾಜ್ಯದಲ್ಲಿನ ಉನ್ನತ ಶಿಕ್ಷಣ ಕ್ಷೇತ್ರಕ್ಕೆ ತಾಂತ್ರಿಕ ಶಿಕ್ಷಣ ಇಲಾಖೆಯಿಂದ ಸರ್ಕಾರದ ಅಭಿವೃದ್ಧಿ ಪರ ಯೋಜನೆಗಳ ವಿವರಗಳು ಈ ಕೆಳಕಂಡಂತಿವೆ.

1) ತಾಂತ್ರಿಕ ಶಿಕ್ಷಣ ಪದ್ಧತಿಯಲ್ಲಿ ಗುಣಮಟ್ಟ ಅಭಿವೃದ್ಧಿ ಕಾರ್ಯಕ್ರಮ (ಟಿ.ಇ.ಕ್ಯೂ.ಐ.ಪಿ)
2) ಮಾಹಿತಿ ತಂತ್ರಜ್ಞಾನ ಶಿಕ್ಷಣದ ಗುಣಮಟ್ಟ ಸುಧಾರಣೆ
3) ಸಿಬ್ಬಂದಿ ತರಬೇತಿ ಕಾರ್ಯಕ್ರಮ
4) ತಾಂತ್ರಿಕ ಶಿಕ್ಷಣ ಮುಂದುವರಿಕಾ ಕೇಂದ್ರ ಕಾರ್ಯಕ್ರಮ
5) ಮಹಿಳಾ ಶಿಕ್ಷಣಕ್ಕೆ ಆದ್ಯತೆ
6) ಅಂಗವಿಕಲ ವಿದ್ಯಾರ್ಥಿಗಳಿಗೆ ಸೌಲಭ್ಯಗಳು
7) ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹ ಕಾರ್ಯಕ್ರಮ
8) ವಿಶೇಷ ಘಟಕ ಯೋಜನೆ
9) ಗಿರಿಜನ ಉಪಯೋಜನೆ
10) ಅಪ್ರೆಂಟಿಶಿಪ್ ಟ್ರೈನಿಂಗ್ ಕಾರ್ಯಕ್ರಮ
11) ವಿದ್ಯಾರ್ಥಿಗಳಿಗೆ ಮೇಲ್ವಿಚಾರಣ ಅಭಿವೃದ್ಧಿ, ಮತ್ತು ಜೀವನ ಮಾರ್ಗದರ್ಶನ ಕಾರ್ಯಕ್ರಮಗಳು
12) ಗಣಕೀಕೃತ ಪರೀಕ್ಷಾ ಫಲಿತಾಂಶಗಳ ಪ್ರಕಟಣೆ
13) ಆಪ್ತಮಿತ್ರ ಕಾರ್ಯಕ್ರಮ
14) ಲ್ಯಾನ್ ಮತ್ತು ವೆಬ್ ಸೈಟುಗಳನ್ನು ಅಳವಡಿಕೆಯ ಕಾರ್ಯಕ್ರಮ
15) ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್‌ನ ಅರೆಕಾಲಿಕ ಉಪನ್ಯಾಸಕರುಗಳ ಸಂಭಾವನೆ ಹೆಚ್ಚಿಸಿದ ಬಗ್ಗೆ
16) ಕೇಂದ್ರ ಸರ್ಕಾರದ ಸಹಾಯದಿಂದ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಮಹಿಳಾ ಹಾಸ್ಟಲ್ ನಿರ್ಮಿಸುವ ಬಗ್ಗೆ.

17) ಕೇಂದ್ರ ಸರ್ಕಾರದ ಸಹಾಯದಿಂದ ಸರ್ಕಾರಿ ಪಾಲಿಟೆಕ್ನಿಕ್‌ಗಳನ್ನು ಮೇಲ್ದರ್ಜೆಗೆ ಏರಿಸಲು ಹಾಗೂ ಆಧುನೀಕರಣಗೊಳಿಸುವ ಕಾರ್ಯಕ್ರಮ

ಅನುಬಂಧ – 2

2010–11ನೇ ಸಾಲಿನಲ್ಲಿ ಯೋಜನಾ ಕಾರ್ಯಕ್ರಮಗಳಿಗೆ ಸರ್ಕಾರದ ಅನುದಾನ ನೀಡಿಕೆಯ ವಿವರಗಳು ಕೆಳಕಂಡಂತಿವೆ.

(ರೂ.ಲಕ್ಷಗಳಲ್ಲಿ)

ಕ್ರ ಸಂ.	ಲೆಕ್ಕಶೀರ್ಷಿಕೆ ಮತ್ತು ಯೋಜನೆ	2010–11ನೇ ಸಾಲಿಗೆ ಒದಗಿಸಲಾದ ಅನುದಾನ
1	2	3
1	ನಿರ್ದೇಶನ ಮತ್ತು ಆಡಳಿತ – "2202–03–001–0–01"	103.50
2	ಇತರೆ ಸರ್ಕಾರಿ ಕಾಲೇಜುಗಳು – "2202–03–103–2–01"	11090.00
3	ಖಾಸಗಿ ಕಾಲೇಜುಗಳಿಗೆ ಸಹಾಯಾನುದಾನ – "2202–03–104–1–01–101"	125.00
4	17 ಸರ್ಕಾರಿ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗಗಳನ್ನು ತೆರೆಯುವುದು – "2202–03–103–2–04"	5000.00
5	ಪದವಿ ಮಟ್ಟದಲ್ಲಿ ವಿಜ್ಞಾನ ಓದುವ ಪ್ರತಿಭಾನ್ವಿತ ವಿದ್ಯಾರ್ಥಿಗಳ ಪ್ರೋತ್ಸಾಹಕ್ಕಾಗಿ ವಿದ್ಯಾರ್ಥಿ ವೇತನ "2202.	80.50
6	ಸಂಚಿ ಹೊನ್ನಮ್ಮ ವಿದ್ಯಾರ್ಥಿ ವೇತನ "–2202–03–107–1–12–117"	103.50
7	ಪದವಿ ಕಾಲೇಜುಗಳಲ್ಲಿ ಕಂಪ್ಯೂಟರ್ ಶಿಕ್ಷಣದ ಸೇರ್ಪಡೆ – "2202–03–800–1–08–"	180.00

8	ಕಿತ್ತೂರು ರಾಣಿ ಚೆನ್ನಮ್ಮ ಪುರಸ್ಕಾರ "2202-03-107-1-13-107"	80.50
9	ಬಿಜಾಪುರದಲ್ಲಿ ಪದವಿ ಕಾಲೇಜು- "2202-03-103-2-02"	78.30
10	ಮೈಸೂರಿನಲ್ಲಿ ಮಹಿಳಾ ಕಾಲೇಜು - "2202-03-103-2-03"	70.00
11	ಶಿಕ್ಷಣ ಸಂಸ್ಥೆಗಳ ಪರವಾಗಿ ಭೂಸ್ವಾಧೀನ- "2202-03-800-5-00-132"	529.00
12	ಸರ್ಕಾರಿ ಕಾಲೇಜುಗಳ ಕಟ್ಟಡ ನಿರ್ಮಾಣ (ಬಂಡವಾಳ ವೆಚ್ಚ) - "4202-01-203-1-01"	5517.00
13	ರಾಷ್ಟ್ರೀಯ ಅಂಗೀಕೃತ ಪರಿಷತ್ತು (ನ್ಯಾಕ್) - "2202-03-112-0-09"	10.00
14	ಮಹಾವಿದ್ಯಾಲಯಗಳಲ್ಲಿ ಮೃದು ಕೌಶಲ್ಯ ಅಭಿವೃದ್ಧಿ - "2202-03-103-2-07"	1000.00
	ಒಟ್ಟು	**23967.30**

ಅನುಬಂಧ – 2

ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀ ಹ್ಯಾರೀಸ್. ಎನ್.ಎ. (ಶಾಂತಿನಗರ) ಇವರ ಪ್ರಶ್ನೆ ಸಂಖ್ಯೆ: 926

ವಿಷಯ: ರಾಜ್ಯದ ಉನ್ನತ ಶಿಕ್ಷಣ ಕ್ಷೇತ್ರದ ಅಭಿವೃದ್ಧಿ.
ಉಲ್ಲೇಖ: ಪ್ರಶಾವಿಸ/13ನೇವಿಸ/96/ಪ್ರಸಂ.926/2011.

ಇ) ಶಿಕ್ಷಣ ಗುಣಮಟ್ಟ ಮತ್ತು ಸಮಕಾಲೀನ ಸನ್ನಿವೇಶಕ್ಕೆ ಅನುಗುಣವಾದ ಶಿಕ್ಷಣವನ್ನು ನೀಡುವ ದಿಶೆಯಲ್ಲಿ ಸರ್ಕಾರದ ಚಿಂತನೆಗಳು;

ಪಾಲಿಟೆಕ್ನಿಕ್‌ನ ಶಿಕ್ಷಣದ ಗುಣಮಟ್ಟವನ್ನು ಉತ್ತಮಪಡಿಸಲು ಹಾಗೂ ಸಮಕಾಲೀನ ಸನ್ನಿವೇಶಕ್ಕೆ ಅನುಗುಣವಾಗಿಸಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.

1) ಕಾಲಕಾಲಕ್ಕೆ ಪಠ್ಯಕ್ರಮವನ್ನು ಪರಿಷ್ಕರಿಸಲಾಗುತ್ತದೆ.

ಈಗಾಗಲೇ ಕಳೆದ 2 ವರ್ಷಗಳಿಂದ ಒಂದರಿಂದ ನಾಲ್ಕನೇ ಸೆಮಿಸ್ಟರಿನ ಡಿಪ್ಲೊಮಾ ಪಠ್ಯಕ್ರಮವನ್ನು ಪರಿಷ್ಕರಿಸಲಾಗಿದ್ದು, ಪಾಲಿಟೆಕ್ನಿಕ್ ನಲ್ಲಿ ಬೋಧಿಸಲಾಗುತ್ತಿದೆ. 5 ಮತ್ತು 6ನೇ ಸೆಮಿಸ್ಟರಿನ ಪಠ್ಯಕ್ರಮವನ್ನು ಪರಿಷ್ಕರಿಸಲಾಗುತ್ತಿದ್ದು, 2011–12 ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಅಳವಡಿಸಲಾಗುವುದು. ಈ ಪರಿಷ್ಕರಣೆಯಲ್ಲಿ ಕೈಗಾರಿಕೆಗಳಲ್ಲಿನ ಪರಿಣಿತರ ಸಲಹೆ ಪಡೆಯಲಾಗಿದೆ. ಹಾಗೂ ಹಳೇ ಪಠ್ಯ ಕ್ರಮಕ್ಕೆ ಹೋಲಿಸಿದಾಗ 1ನೇ ಹಾಗೂ 2ನೇ ವರ್ಷದ ಪಠ್ಯಕ್ರಮಗಳಲ್ಲಿ ಸುಮಾರು ಶೇ. 25 ರಿಂದ 30 ರಷ್ಟು ಪಠ್ಯಕ್ರಮದಲ್ಲಿ ಬದಲಾವಣೆಯನ್ನು ಮಾಡಲಾಗಿದೆ.

2) ಕಳೆದ ಎರಡು ವರ್ಷದಿಂದ ಕೆ.ಪಿ.ಎಸ್.ಸಿ ಯಿಂದ ಹೊಸದಾಗಿ ಆಯ್ಕೆಗೊಂಡ 410 ಉಪನ್ಯಾಸಕರಿಗೆ Induction Programme ಹಾಗೂ ಇತರ ತಾಂತ್ರಿಕ ವಿಷಯಗಳಲ್ಲಿ ತರಬೇತಿಯನ್ನು ನೀಡಲಾಗಿದೆ.

3. ನಿರಂತರವಾಗಿ Staff development Programme ಅನ್ನು ಉಪನ್ಯಾಸಕರ ಜ್ಞಾನಾಭಿವೃದ್ಧಿಗೆ ನೀಡಲಾಗುತ್ತದೆ. ಇದರಿಂದ ಬದಲಾದ ಪಠ್ಯಕ್ರಮವನ್ನು ವಿದ್ಯಾರ್ಥಿಗಳಿಗೆ ಬೋಧನೆ ಮಾಡಿ ಸಮಕಾಲೀನ ಸನ್ನಿವೇಶಕ್ಕೆ ಅನುಗುಣವಾದ ಶಿಕ್ಷಣವನ್ನು ನೀಡುವಲ್ಲಿ ಇಲಾಖೆ ನಿರತವಾಗಿದೆ. ಈಗಾಗಲೇ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರಿಗೆ 2009–10ನೇ ಸಾಲಿನಲ್ಲಿ ಸುಮಾರು 111 ತರಬೇತಿಗಳನ್ನು ಎನ್.ಐ.ಟಿ.ಟಿ.ಟಿ.ಆರ್. ಅವರ ಸಹಯೋಗದಲ್ಲಿ ಆಯೋಜಿಸಿ 1400 ಉಪನ್ಯಾಸಕರುಗಳಿಗೆ ತಾಂತ್ರಿಕ ವಿಷಯಗಳಲ್ಲಿ ತರಬೇತಿಯನ್ನು ನೀಡಲಾಗಿದೆ. ಹಾಗೂ 2010–11ನೇ ಶೈಕ್ಷಣಿಕ ಸಾಲಿನಲ್ಲಿ 106 ತರಬೇತಿಗಳನ್ನು ಆಯೋಜಿಸಲಾಗಿದ್ದು, 1350 ಜನ ಉಪನ್ಯಾಸಕರುಗಳಿಗೆ ತಾಂತ್ರಿಕ ಕ್ಷೇತ್ರಗಳಲ್ಲಿ ಇತ್ತೀಚಿನ ಬೆಳವಣಿಗೆಗಳ ಬಗ್ಗೆ ತಿಳುವಳಿಕೆಯನ್ನು ತರಬೇತಿಯ ಮೂಲಕ ನೀಡಲಾಗಿದೆ.

4. ಅಂತೆಯೇ ಪಾಲಿಟೆಕ್ನಿಕ್‌ಗಳಲ್ಲಿನ ಪ್ರಯೋಗಾಲಯದಲ್ಲಿ ಹೊಸ ಪಠ್ಯಕ್ರಮಕ್ಕನುಗುಣವಾಗಿ ಅತ್ಯಾಧುನಿಕ ಉಪಕರಣಗಳನ್ನು ಒದಗಿಸಲಾಗುತ್ತಿದೆ. ಉದಾ: Total station, Cadence (Civil), Embedded System Software-Kiel (E&C), Parametric Modeling, Auto caste (Mechanical)

ಅನುಬಂಧ – 3

ಶಿಕ್ಷಣದ ಗುಣಮಟ್ಟ ಮತ್ತು ಸಮಕಾಲೀನ ಸನ್ನಿವೇಶಕ್ಕೆ ಅನುಗುಣವಾದ ಶಿಕ್ಷಣವನ್ನು ನೀಡುವ ದಿಸೆಯಲ್ಲಿ ಕಾಲೇಜು ಶಿಕ್ಷಣ ಇಲಾಖೆಯು ಈ ಕೆಳಕಂಡ ವಿದ್ಯಾರ್ಥಿಪರ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

- ಕಾಲೇಜುಗಳ ಶೈಕ್ಷಣಿಕ ಗುಣಮಟ್ಟವನ್ನು ಉತ್ತಮಪಡಿಸುವ ಉದ್ದೇಶದಿಂದ ಎಲ್ಲಾ ಕಾಲೇಜುಗಳು ಆಂತರಿಕ ಗುಣಮಟ್ಟ ಭರವಸೆ ಕೋಶವನ್ನು ಸ್ಥಾಪಿಸಿ, ಕಾಲೇಜಿನ ಸರ್ವಾಂಗೀಣ ಪ್ರಗತಿಯನ್ನು ಸಾಧಿಸಲು ಕ್ರಮ ಕೈಗೊಳ್ಳಲಾಗಿದೆ.
- ಎಲ್ಲಾ ಸರ್ಕಾರಿ ಕಾಲೇಜುಗಳು ನ್ಯಾಕ್ ಮಾನ್ಯತೆ ಪಡೆಯುವ ನಿಟ್ಟಿನಲ್ಲಿ ನ್ಯಾಕ್ ಮೌಲ್ಯಮಾಪನ ಹಾಗೂ ಮರುಮೌಲ್ಯಮಾಪನಕ್ಕೆ ಒಳಪಡಿಸಲು ಅಗತ್ಯ ಕ್ರಮಕೈಗೊಳ್ಳಲಾಗುತ್ತಿದೆ.
- ಸರ್ಕಾರಿ ಪದವಿ ಕಾಲೇಜುಗಳನ್ನು ವಿಶ್ವವಿದ್ಯಾಲಯ ಅನುದಾನ ಆಯೋಗ (ಯು.ಜಿ.ಸಿ.)ದ 2ಎಫ್ 12ಬಿ ಮಾನ್ಯತೆಗೆ ಒಳಪಡಿಸಲು ಮತ್ತು ಯು.ಜಿ.ಸಿ. ಯಿಂದ ಕಾಲ ಕಾಲಕ್ಕೆ ಅಭಿವೃದ್ಧಿಗಾಗಿ ದೊರೆಯುವ ಅನುದಾನವನ್ನು ಪೂರ್ಣ ಪ್ರಮಾಣದಲ್ಲಿ ಪಡೆಯಲು ಅಗತ್ಯ ಕ್ರಮಕೈಗೊಳ್ಳಾಗುತ್ತಿದೆ.
- 16 ಸರ್ಕಾರಿ ಪದವಿ ಕಾಲೇಜುಗಳನ್ನು ವಿಶ್ವವಿದ್ಯಾಲಯ ಅನುದಾನ ಆಯೋಗ (ಯು.ಜಿ.ಸಿ.)ದ **One Time Catch Up** ಯೋಜನೆಗೆ ಒಳಪಡಿಸಿ ಈ ಮೂಲಕ ರೂ.1.00 ಕೋಟಿಗಳ ಅನುದಾನವನ್ನು ಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ.
- ಇಲಾಖಾ ವ್ಯಾಪ್ತಿಯ ಸರ್ಕಾರಿ ಪದವಿ ಕಾಲೇಜುಗಳಲ್ಲಿ 2011–12ನೇ ಸಾಲಿನಲ್ಲಿ ಕಾಲೇಜುಗಳಲ್ಲಿನ ಬೇಡಿಕೆಗನುಗುಣವಾಗಿ ಹೊಸ ಕೋರ್ಸ್/ ಕಾಂಬಿನೇಷನ್‌ಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು. ಹಾಗೂ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಬೇಡಿಕೆಗನುಗುಣವಾಗಿ ಹೊಸದಾಗಿ ಸ್ನಾತಕ್ಕೋತ್ತರ ಕೋರ್ಸುಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು. ಹಾಗೂ

ಸಂಶೋಧನಾ ಕೇಂದ್ರಗಳನ್ನು ಸಹ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

- **ಎಜುಸ್ಯಾಟ್**

  ನಗರ ಪ್ರದೇಶ ಹಾಗೂ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳ ನಡುವೆ ಇರುವ ಅಸಮತೋಲನವನ್ನು ಹೋಗಲಾಡಿಸಲು ಮತ್ತು ಅವರಿಗೆ ಗುಣಮಟ್ಟದ ಶಿಕ್ಷಣ ನೀಡಲು ಹಾಗೂ ಆಧುನಿಕ ತಂತ್ರಜ್ಞಾನವನ್ನು ಉಪಯೋಗಿಸಿಕೊಂಡು ಕಾಲೇಜುಗಳಲ್ಲಿ ಹಾಲಿ ಇರತಕ್ಕ ಬೋಧಕ ಸಿಬ್ಬಂದಿಯ ಕೊರತೆಯನ್ನು ನೀಗಿಸುವ ಸಲುವಾಗಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಕಾಲೇಜು ಗಳಲ್ಲಿ ವಿದ್ಯಾರ್ಥಿ ಹಾಗೂ ಬೋಧಕರ ಉಪಯೋಗಕ್ಕಾಗಿ Edusat Project ಅನ್ನು ISRO ಸಂಸ್ಥೆಯ ನೆರವಿನೊಂದಿಗೆ ಕಾರ್ಯಗತಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಈ ಸಂಬಂಧ ಭಾರತ ಸರ್ಕಾರದ ಇಸ್ರೋ ಸಂಸ್ಥೆ ಹಾಗೂ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಸಹಕಾರದೊಂದಿಗೆ ಕಾಲೇಜು ಶಿಕ್ಷಣ ಇಲಾಖೆಯ 142 ಸರ್ಕಾರಿ ಪದವಿ ಕಾಲೇಜು ಗಳಲ್ಲಿ Edusat ಪ್ರಾಜೆಕ್ಟಿನ ಉಪಗ್ರಹ ಆಧಾರಿತ ಶಿಕ್ಷಣ ಕಾರ್ಯಕ್ರಮವನ್ನು ಜಾರಿಗೆ ತರಲು ಎಲ್ಲಾ ಪೂರ್ವಬಾವಿ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಶೀಘ್ರದಲ್ಲಿ ಅನುಷ್ಠಾನಗೊಳಿ ಸಲಾಗುವುದು.

ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ. ಹ್ಯಾರೀಸ್. ಎನ್.ಎ (ಶಾಂತಿನಗರ) ಇವರ ಚುಕ್ಕೆ ಗುರುತಿನ ಪ್ರಶ್ನೆ 926ಕ್ಕೆ ಕರಡು ಉತ್ತರ.

ಈ) ಉನ್ನತ ಶಿಕ್ಷಣಕ್ಕೆ ಸೇರ್ಪಡೆಯಾಗುವ ವಿದ್ಯಾರ್ಥಿಗಳ ಸಂಖ್ಯೆಯಲ್ಲಿ ಹೆಚ್ಚಳದ ಪ್ರಮಾಣದ ವಿವರಗಳೇನು?

ಉನ್ನತ ಶಿಕ್ಷಣ ವ್ಯಾಸಂಗದಲ್ಲಿನ ರಾಜ್ಯದಲ್ಲಿನ ಇಂಜಿನಿಯರಿಂಗ್ ಕೋರ್ಸ್‌ಗಳ ಪ್ರವೇಶಕ್ಕೆ ಸಂಬಂಧಿಸಿದಂತೆ, ಕಳೆದ 05 ವರ್ಷಗಳ ವಿವರವನ್ನು ಈ ಕೆಳಗೆ ನಮೂದಿಸಲಾಗಿದೆ.

ಕ್ರ. ಸಂ.	ವರ್ಷ	ಇಂಜಿನಿಯರಿಂಗ್ ಕಾಲೇಜುಗಳ ಸಂಖ್ಯೆ	ಒಟ್ಟು ಪ್ರವೇಶ ಸ್ಥಾನಗಳು	ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ
1.	2006–07	123	48075	45320
2.	2007–08	138	55762	55674
3.	2008–09	157	60847	53489
4.	2009–10	174	68369	55760
5.	2010–11	187	75887	60680

ಪೂರಕ ಟಿಪ್ಪಣಿ:–

ಕಳೆದ 05 ವರ್ಷಗಳಿಂದೀಚೆಗೆ ರಾಜ್ಯದಲ್ಲಿ ಇಂಜಿನಿಯರಿಂಗ್ ಕಾಲೇಜುಗಳ ಸಂಖ್ಯೆಗಳು ಹೆಚ್ಚಳವಾಗಿದ್ದರಿಂದ, ಇಂಜಿನಿಯರಿಂಗ್ ಕಾಲೇಜುಗಳ ಪ್ರವೇಶ ಸ್ಥಾನಗಳಲ್ಲಿಯೂ ಏರಿಕೆಯಾಗಿರುತ್ತದೆ. 2006–07ನೇ ಸಾಲಿನಿಂದ 2010–11ನೇ ಸಾಲಿನವರೆಗಿನ ಇಂಜಿನಿಯರಿಂಗ್ ಕಾಲೇಜುಗಳ ಸಂಖ್ಯೆ, ಪ್ರವೇಶ ಸ್ಥಾನಗಳ ವಿವರ ಮತ್ತು ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆಯ ಮಾಹಿತಿಯನ್ನು ಮೇಲೆ ನೀಡಲಾಗಿದೆ.

ಅನುಬಂಧ – 4

- ವಿದ್ಯಾರ್ಥಿನಿಯರಿಗೆ ಉನ್ನತ ಶಿಕ್ಷಣವನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ಸರ್ಕಾರಿ ಆದೇಶ ಸಂಖ್ಯೆ: ಇಡಿ/192/ಯೋಯೋಕ/ 2007, ಬೆಂಗಳೂರು, ದಿನಾಂಕ: 26.06.2007 [ಇಡಿ/102/ಸ್ಟೀಮರ (ಯುನಿಕ್) 2007, ದಿನಾಂಕ: 26.06.2007] ರನ್ವಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪದವಿ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿನಿಯರಿಗೆ ನಿಗಧಿತ ಬೋಧನಾ ಶುಲ್ಕ ಮತ್ತು ಪ್ರಯೋಗಾಲಯ ಶುಲ್ಕವನ್ನು ಮನ್ನಾ ಮಾಡಲಾಗಿದೆ.
- ಶಿಕ್ಷಣ ಕ್ಷೇತ್ರವನ್ನು ಸಶಕ್ತಗೊಳಿಸಿ, ಸಾಮಾಜಿಕ ನ್ಯಾಯದ ಶಕ್ತಿಯನ್ನಾಗಿಸುವ ನಿಟ್ಟಿನಲ್ಲಿ ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳೂ ಸಹ ಪ್ರವೇಶ ಪಡೆಯಲು ಅನುಕೂಲವಾಗುವಂತೆ ಸರ್ಕಾರದ ಆದೇಶ

ಸಂಖ್ಯೆ: ಇಡಿ/102/ಯುಎನ್‌ಇ/2009, ಬೆಂಗಳೂರು, ದಿನಾಂಕ: 04.06.2009ರಲ್ಲಿ 2009–10ನೇ ಶೈಕ್ಷಣಿಕ ಸಾಲಿನಿಂದ ರಾಜ್ಯದ ಎಲ್ಲಾ ಸರ್ಕಾರಿ ಕಾಲೇಜುಗಳಲ್ಲಿ ಯಾವುದೇ ಒಬ್ಬ ವಿದ್ಯಾರ್ಥಿ ಪದವಿ ಕೋರ್ಸುಗಳಿಗೆ ಪ್ರವೇಶ ಕೋರಿ ಬಂದಲ್ಲಿ, ಪ್ರವೇಶಾತಿಯನ್ನು ನಿರಾಕರಿಸುವಂತಿಲ್ಲವೆಂದೂ, ವಿದ್ಯಾರ್ಥಿಗಳ ಕೋರಿಕೆಗನುಗುಣವಾಗಿ ಪ್ರವೇಶಾತಿ ಪ್ರಮಾಣವನ್ನು ಹೆಚ್ಚಿಸಲು ಮಂಜೂರಾತಿ ನೀಡಿದೆ. ಒಂದು ಪಕ್ಷ ಯಾವುದೇ ವಿಭಾಗಕ್ಕೆ 15 ಮತ್ತು ಅದಕ್ಕಿಂತ ಕಡಿಮೆ ವಿದ್ಯಾರ್ಥಿಗಳು ಪ್ರವೇಶಾತಿ ಆದಲ್ಲಿ ಆ ವಿದ್ಯಾರ್ಥಿಗಳನ್ನು ಹಾಲಿ ಇರುವ ವಿಭಾಗದಲ್ಲಿಯೇ ಸೇರಿಸಿಕೊಳ್ಳಬೇಕೆಂತಲೂ ಹಾಗೂ 15ಕ್ಕೂ ಹೆಚ್ಚಿನ ಪ್ರಮಾಣದಲ್ಲಿ ವಿದ್ಯಾರ್ಥಿಗಳು ಪ್ರವೇಶಾತಿ ಆದಲ್ಲಿ ನೂತನ ವಿಭಾಗವನ್ನು ತೆರೆಯಲು ಸಹ ಅನುಮತಿ ನೀಡಲಾಗಿದೆ.

ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಎನ್.ಎ. ಹ್ಯಾರಿಸ್ (ಶಾಂತಿನಗರ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 926ಕ್ಕೆ ಪೂರಕ ಟಿಪ್ಪಣಿ.

ಉನ್ನತ ಶಿಕ್ಷಣ ಎಂದಿಗಿಂತಲೂ ಇಂದು ಅತಿ ಹೆಚ್ಚು ವೇಗವಾಗಿ ತನ್ನ ಸಾಧ್ಯತೆಗಳನ್ನು ವಿಸ್ತರಿಸಿಕೊಳ್ಳುತ್ತಾ, ಬದಲಾವಣೆಯ ಹಾದಿಯಲ್ಲಿ ಸಾಗಿದೆ. ಜಾಗತೀಕರಣದ ಹಿನ್ನೆಲೆಯಲ್ಲಿ ಉನ್ನತ ಶಿಕ್ಷಣದಲ್ಲಿ ಆಗಬಹುದಾದ ಬದಲಾವಣೆಗಳು ಸಾಮಾಜಿಕ, ಆರ್ಥಿಕ ಮತ್ತು ಮಾನಸಂಪನ್ಮೂಲದ ವಿಷಯಗಳಲ್ಲಿ ಅತಿಹೆಚ್ಚು ಪರಿಣಾಮಕಾರಿಯಾಗಲಿವೆ. ಕಾಲೇಜು ಶಿಕ್ಷಣ ಇಲಾಖೆಯು ಉನ್ನತ ಶಿಕ್ಷಣವನ್ನು ಹೆಚ್ಚು ಪ್ರಸ್ತುತ, ಪ್ರಯೋಜನಕಾರಿ ಮತ್ತು ಉಪಯುಕ್ತವಾಗಿಸಲು ಸಾಮಾಜಿಕ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಸಮಾಜದ ಎಲ್ಲಾ ವರ್ಗದವರಿಗೂ ಉನ್ನತ ಶಿಕ್ಷಣವನ್ನು ಪಡೆಯುವ ಅವಕಾಶಗಳನ್ನು ಕಲ್ಪಿಸುವ ದೃಷ್ಟಿಯಿಂದ ಪದವಿ/ಸ್ನಾತಕೋತ್ತರ ಕೋರ್ಸುಗಳನ್ನು ರಾಜ್ಯದ ಎಲ್ಲಾ ಜಿಲ್ಲಾ, ತಾಲ್ಲೂಕು ಹಾಗೂ ಪ್ರಮುಖ ಹೋಬಳಿ ಕೇಂದ್ರಗಳಲ್ಲಿ 356 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸಿದ್ದು, ಪ್ರಮುಖ ಜಿಲ್ಲಾ

ಕೇಂದ್ರಗಳ 40 ಸರ್ಕಾರಿ ಕಾಲೇಜುಗಳಲ್ಲಿ 105 ಸ್ನಾತಕೋತ್ತರ ಕೋರ್ಸು ಗಳನ್ನು ಪ್ರಾರಂಭಿಸಿ, ಗುಣಮಟ್ಟದ ಶಿಕ್ಷಣವನ್ನು ನೀಡುತ್ತಿದೆ. (ಪ್ರತಿ ಲಗತ್ತಿಸಿದೆ)

ರಾಜ್ಯದಲ್ಲಿ 356 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿದ್ದು, ಈ ಪೈಕಿ 164 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಸ್ವಂತ ಕಟ್ಟಡವನ್ನು ಹೊಂದಿದ್ದು, ಕಳೆದ 3 ವರ್ಷಗಳಿಂದ ಇವುಗಳ ದುರಸ್ತಿ ಇನ್ನಿತರ ಕಾರ್ಯಗಳಿಗಾಗಿ ರೂ.295.49 ಲಕ್ಷಗಳನ್ನು ವೆಚ್ಚ ಮಾಡಲಾಗಿರುತ್ತದೆ. 13 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಕಟ್ಟಡ ನಿರ್ಮಾಣ ಹಂತದಲ್ಲಿದ್ದು, ಇವುಗಳ ವೆಚ್ಚ ರೂ.8517.00 ಲಕ್ಷಗಳನ್ನು 2010–11ನೇ ಸಾಲಿನಲ್ಲಿ ಬಿಡುಗಡೆ ಮಾಡಲಾಗಿದೆ.

ಹಾಗೂ 2010–11ನೇ ಸಾಲಿನಲ್ಲಿ ಯೋಜನಾ ಕಾರ್ಯಕ್ರಮಗಳಿಗೆ ಸರ್ಕಾರದ ಅನುದಾನ ನೀಡಿಕೆಯ ವಿವರಗಳನ್ನು ಅನುಬಂಧ–2 ರಲ್ಲಿ ಲಗತ್ತಿಸಿದೆ.

ಶಿಕ್ಷಣದ ಗುಣಮಟ್ಟ ಮತ್ತು ಸಮಕಾಲೀನ ಸನ್ನಿವೇಶಕ್ಕೆ ಅನುಗುಣವಾದ ಶಿಕ್ಷಣವನ್ನು ನೀಡುವ ದಿಸೆಯಲ್ಲಿ ಕಾಲೇಜು ಶಿಕ್ಷಣ ಇಲಾಖೆಯು ಈ ಕೆಳಕಂಡ ವಿದ್ಯಾರ್ಥಿಪರ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ವಿದ್ಯಾರ್ಥಿನಿಯರಿಗೆ ಉನ್ನತ ಶಿಕ್ಷಣವನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ಸರ್ಕಾರಿ ಆದೇಶ ಸಂಖ್ಯೆಃ ಇಡಿ/192/ಯೋಯೋಕ/2007, ಬೆಂಗಳೂರು, ದಿನಾಕ: 26.06.2007 [ಇಡಿ/102/ಸ್ವೀಮರ (ಯುನಿಕ್) 2007, ದಿನಾಂಕ: 26.06.2007] ರನ್ವಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪದವಿ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿನಿಯರಿಗೆ ನಿಗಧಿತ ಬೋಧನಾ ಶುಲ್ಕ ಮತ್ತು ಪ್ರಯೋಗಾಲಯ ಶುಲ್ಕವನ್ನು ಮನ್ನಾ ಮಾಡಲಾಗಿದೆ.

ಶಿಕ್ಷಣ ಕ್ಷೇತ್ರವನ್ನು ಸಶಕ್ತಗೊಳಿಸಿ, ಸಾಮಾಜಿಕ ನ್ಯಾಯದ ಶಕ್ತಿಯನ್ನಾಗಿಸುವ ನಿಟ್ಟಿನಲ್ಲಿ ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳೂ ಸಹ ಪ್ರವೇಶ ಪಡೆಯಲು ಅನುಕೂಲವಾಗುವಂತೆ ಸರ್ಕಾರದ ಆದೇಶ ಸಂಖ್ಯೆ: ಇಡಿ/102/ಯುಎನ್ಇ/2009, ಬೆಂಗಳೂರು, ದಿನಾಂಕ: 04.06.2009ರಲ್ಲಿ 2009–10ನೇ ಶೈಕ್ಷಣಿಕ ಸಾಲಿನಿಂದ ರಾಜ್ಯದ ಎಲ್ಲಾ ಸರ್ಕಾರಿ ಕಾಲೇಜುಗಳಲ್ಲಿ ಯಾವುದೇ ಒಬ್ಬ ವಿದ್ಯಾರ್ಥಿ ಪದವಿ ಕೋರ್ಸುಗಳಿಗೆ ಪ್ರವೇಶ ಕೋರಿ ಬಂದಲ್ಲಿ, ಪ್ರವೇಶಾತಿಯನ್ನು ನಿರಾಕರಿಸುವಂತಿಲ್ಲವೆಂದೂ, ವಿದ್ಯಾರ್ಥಿಗಳ

ಕೋರಿಕೆಗನುಗುಣವಾಗಿ ಪ್ರವೇಶಾತಿ ಪ್ರಮಾಣವನ್ನು ಹೆಚ್ಚಿಸಲು ಮಂಜೂರಾತಿ ನೀಡಿದೆ. ಒಂದು ಪಕ್ಷ ಯಾವುದೇ ವಿಭಾಗಕ್ಕೆ 15 ಮತ್ತು ಅದಕ್ಕಿಂತ ಕಡಿಮೆ ವಿದ್ಯಾರ್ಥಿಗಳು ಪ್ರವೇಶಾತಿ ಆದಲ್ಲಿ ಆ ವಿದ್ಯಾರ್ಥಿಗಳನ್ನು ಹಾಲಿ ಇರುವ ವಿಭಾಗದಲ್ಲಿಯೇ ಸೇರಿಸಿಕೊಳ್ಳಬೇಕೆಂತಲೂ ಹಾಗೂ 15ಕ್ಕೂ ಹೆಚ್ಚಿನ ಪ್ರಮಾಣದಲ್ಲಿ ವಿದ್ಯಾರ್ಥಿಗಳು ಪ್ರವೇಶಾತಿ ಆದಲ್ಲಿ ನೂತನ ವಿಭಾಗವನ್ನು ತೆರೆಯಲು ಸಹ ಅನುಮತಿ ನೀಡಲಾಗಿದೆ.

473 (892) ಶ್ರೀ ಜೆ.ಡಿ. ನಾಯ್ಕ (ಭಟ್ಕಳ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನನಿತ್ಯದ ಕೆಲಸ ಕಾರ್ಯ ಮಾಡುವ ಗುಮಾಸ್ತ ಹುದ್ದೆ, ಜವಾನ ಹುದ್ದೆ ಹಾಗೂ ರಾತ್ರಿ ಪಾಳಿಯ ವಾಚ್‌ಮೆನ್ ಹುದ್ದೆಗಳು ಸಾಕಷ್ಟು ಖಾಲಿ ಇರುವುದು ಹಾಗೂ ಕೆಲವು ಕಡೆ ಹುದ್ದೆಗಳು ಮಂಜೂರಾತಿ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಆ ಹುದ್ದೆಗಳು ಅವಶ್ಯಕ ಇದ್ದಲ್ಲಿ, ಸರ್ಕಾರದ ಕ್ರಮವೇನು;

ಇ) ಖಾಲಿ ಹುದ್ದೆ ಭರ್ತಿ ಮಾಡಲು ಹಾಗೂ ಹೊಸ ಹುದ್ದೆಗಳಿಗೆ ಮಂಜೂರಾತಿ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಹೌದು.

ಆ) ಅನುದಾನಿತ ಪ್ರೌಢಶಾಲೆಗಳಿಗೆ ಒಂದು ದ್ವಿತೀಯ ದರ್ಜೆ ಸಹಾಯಕರ ಹುದ್ದೆಯನ್ನು ಅನುದಾನಕ್ಕೆ ಒಳಪಡಿಸಲು ಕ್ರಮಕೈಗೊಳ್ಳ ಲಾಗುತ್ತಿದೆ. ಗ್ರೂಪ್ – ಡಿ ಹುದ್ದೆಗಳಿಗೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆ ಯೊಂದಿಗೆ ಸಮಾಲೋಚಿಸಿ ಅನುದಾನಕ್ಕೆ ಒಳಪಡಿಸಲು ಕ್ರಮಕೈಗೊಳ್ಳ ಲಾಗುತ್ತಿದೆ.

ಇ) ಖಾಲಿ ಇರುವ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ ಮಂಜೂರು ಮಾಡುವ ಬಗ್ಗೆ ಪ್ರಸ್ತುತ ಆರ್ಥಿಕ ಮಿತವ್ಯಯ ಆದೇಶ ಜಾರಿಯಲ್ಲಿರುತ್ತದೆ.